# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1418 |
| ಸದಸ್ಯರ ಹೆಸರು | : | ಶ್ರೀ ಶಾಂತರಾಮ್ ಬುಡ್ನ ಸಿದ್ದಿ |
| ಉತ್ತರಿಸಬೇಕಾದ ದಿನಾಂಕ | : | 18.12.2025 |
| ಉತ್ತರಿಸಬೇಕಾದ ಸಚಿವರು | : | ಉಪ ಮುಖ್ಯಮಂತ್ರಿ |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ನಾಗರಿಕ ಸೌಲಭ್ಯ ನಿವೇಶನ ವಿಭಾಗವು 21 ನಾಗರಿಕ ಸೌಲಭ್ಯ (ಸಿ.ಎ ನಿವೇಶನಗಳನ್ನು) 30 ವರ್ಷಗಳ ಗುತ್ತಿಗೆ ಆಧಾರದ ಮೇಲೆ ಹಂಚಿಕೆ ಮಾಡಲು 20.10.2022ರಂದು ನಡೆದ ಪ್ರಾಧಿಕಾರದ ಸಭೆಯಲ್ಲಿ ಅನುಮೋದಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈವರೆಗೂ ಸದರಿ ಸಿ.ಎ ನಾಗರಿಕ ಸೌಲಭ್ಯ ನಿವೇಶನಗಳನ್ನು ನೀಡದೇ ತಡೆಹಿಡಿಯಲು ಕಾರಣಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | ಸರ್ಕಾರದ ಪತ್ರ ಸಂಖ್ಯೆ:ನಅಇ 137 ಬೆಂಭೂಸ್ವಾ 2023, ದಿನಾಂಕ:12-06-2023ರನ್ವಯ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ವಿವಿಧ ಸಂಘ-ಸಂಸ್ಥೆಗಳಿಗೆ ಗುತ್ತಿಗೆ ಮತ್ತು ಪಾವತಿ ಆಧಾರದ ಮೇಲೆ ಮಂಜೂರು ಮಾಡಿದ ಜಮೀನು ಮತ್ತು ನಿವೇಶನಗಳನ್ನು ಯಥಾಸ್ಥಿತಿಯಲ್ಲಿ ಇಡುವಂತೆ ಆದೇಶಿಸಲಾಗಿರುತ್ತದೆ. ಆದ್ದರಿಂದ, ಗುತ್ತಿಗೆ ಕರಾರು ಪತ್ರವನ್ನು ನೋಂದಣಿ ಮಾಡುವ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿರುತ್ತದೆ. |
| (ಆ) | ವನವಾಸಿ ಕಲ್ಯಾಣ ಸಂಸ್ಥೆಗೆ ನಾಡಪ್ರಭು ಕೆಂಪೇಗೌಡ ಬಡಾವಣೆ 7ನೇ ಬ್ಲಾಕ್ ಕೊಮ್ಮಘಟ್ಟ ಗ್ರಾಮದ ಸರ್ವೆ ನಂ.51/3, 54ರಲ್ಲಿ ನಿವೇಶನ ಮಂಜೂರಾಗಿ ಅದಕ್ಕೆ ತಗಲುವ ಹಣ ಪಾವತಿ ಕೂಡ ಆಗಿದ್ದಲ್ಲಿ ಇದುವರೆಗೆ ಸದರಿ ಸಂಸ್ಥೆಗೆ ನಿವೇಶನವನ್ನು ನೀಡದೇ ತಡೆಹಿಡಿಯಲು ಕಾರಣಗಳೇನು; ಯಾವ ಕಾಲಮಿತಿಯೊಳಗೆ ಸಿ.ಎ ನಿವೇಶನವನ್ನು ನೀಡಲಾಗುವುದು? | |

**ಸಂಖ್ಯೆ: ನಅಇ 677 ಬೆಂಭೂಸ್ವಾ 2025**

**(ಡಿ ಕೆ ಶಿವಕುಮಾರ್)**
**ಉಪ ಮುಖ್ಯಮಂತ್ರಿ**